ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 30–08–2021

# ಮಾಧ್ಯಮ ಆಹ್ವಾನ
# Media Invitation

Bengaluru University: Geography & Geoinformatics
NATIONAL WORK SHOP ON
"CURRICULAM DESIGN AND CONTENT DEVELOPMENT for UNDERGRADUATE PROGRAMS AS PER NEP-2020"

Dr. Ashwathnarayan C.N
Minister for Higher Education; IT & BT, Science and Technology Government of Karnataka.

Prof. Venugopal K.R
Vice-Chancellor, Bengaluru University

Date: 31-08-2021, Tuesday
Time: Morning 10.30 A.M
Venue: Conference Hall, Geography and Geoinformatics, Bangalore University, Jnanabharathi, Bengaluru-56

# ಪತ್ರಿಕಾ ಪ್ರಕಟಣೆ
**PRESS RELEASE**

# ಸಾರ್ವಜನಿಕರ ಗಮನಕ್ಕೆ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

ಇತ್ತೀಚೆಗೆ ಮಾಧ್ಯಮಗಳಲ್ಲಿ **"ಗ್ರಾಮೀಣ ಪಶು ಸಂಗೋಪನಾ ನಿಗಮ ನಿಯಮಿತ"** ಎಂಬ ಸಂಸ್ಥೆಯ ವತಿಯಿಂದ ಪಶುಸಂಗೋಪನಾ ಕಾರ್ಯಕರ್ತ ಹುದ್ದೆಗೆ ಜಾಹಿರಾತು ಪ್ರಕಟವಾಗಿದ್ದು, ಸದರಿ ಸಂಸ್ಥೆಗೂ ಮತ್ತು ಅದರ ಜಾಹೀರಾತಿಗೂ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಗೆ ಯಾವುದೇ ಸಂಬಂಧವಿರುವುದಿಲ್ಲ ಎಂದು ನಿರ್ದೇಶಕರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಗೆ ಸಂಬಂಧಪಟ್ಟಂತಹ ಯಾವುದೇ ಯೋಜನೆಗಳಾಗಲಿ, ಜಾಹೀರಾತುಗಳಾಗಲಿ ಅಥವಾ ಯಾವುದೇ ನೇಮಕಾತಿಗೆ ಸಂಬಂಧಿಸಿದ ಪ್ರಕಟಣೆಗಳನ್ನು ಇಲಾಖೆಯ ಅಧಿಕೃತ ಜಾಲತಾಣ ahvs.kar.nic.in ನಲ್ಲಿ ಪ್ರಕಟಿಸಲಾಗುತ್ತದೆ.

ಆದ್ದರಿಂದ ಸಾರ್ವಜನಿಕರು ಇಂತಹ ಅನಧಿಕೃತ ನೇಮಕಾತಿ ಜಾಹೀರಾತುಗಳಿಗೆ ಮೋಸ ಹೋಗಬಾರದೆಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ನಿರ್ದೇಶಕರಾದ ಡಾ.ಮಂಜುನಾಥ್ ಎಸ್ ಪಾಳೇಗಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಗರಾಭಿವೃದ್ಧಿ ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

ನಗರಾಭಿವೃದ್ಧಿ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎ.ಬಸವರಾಜ (ಬೈರತಿ) ಅವರು ಆಗಸ್ಟ್ 31 ಮತ್ತು ಸೆಪ್ಟೆಂಬರ್ 01 ರಂದು ಬೆಳಗಾವಿ, ಧಾರವಾಡ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಸೆಪ್ಟೆಂಬರ್ 02 ಮತ್ತು 03 ರಂದು ಧಾರವಾಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಇ–ಸ್ವತ್ತು ತಂತ್ರಾಂಶ ತಾತ್ಕಾಲಿಕವಾಗಿ ಸ್ಥಗಿತ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಆಸ್ತಿಗಳನ್ನು ಇ–ಸ್ವತ್ತು ಮೂಲಕ ವಿಭಜನೆ (Sub division) ಮಾಡಲು ಅವಕಾಶ ನೀಡಲಾಗಿದ್ದು, ಪ್ರಸ್ತುತ ಇ–ಸ್ವತ್ತು ತಂತ್ರಾಂಶದಲ್ಲಿ ತಾಂತ್ರಿಕ ನಿರ್ವಹಣೆಯನ್ನು ಕೈಗೊಳ್ಳುವ ಸಲುವಾಗಿ ಇ–ಸ್ವತ್ತು ತಂತ್ರಾಂಶದಲ್ಲಿ ಆಸ್ತಿ ವಿಭಜಿಸುವ ಪ್ರಕ್ರಿಯೆಯನ್ನು ಸೆಪ್ಟೆಂಬರ್ 01 ರಿಂದ 07ರವರೆಗೆ ಒಟ್ಟು 7 ದಿನಗಳ ಕಾಲ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಇ–ಆಡಳಿತ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2020–21ನೇ ಸಾಲಿನ ಸೆಪ್ಟಂಬರ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ನೋಂದಾಯಿಸಲು ಅವಧಿ ವಿಸ್ತರಣೆ

**ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):**

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ 2020–2021ನೇ ಸಾಲಿನ ಸೆಪ್ಟಂಬರ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ವಿದ್ಯಾರ್ಥಿಗಳ ನೋಂದಣಿ ಮತ್ತು ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕಗಳನ್ನು ವಿಸ್ತರಿಸಿದೆ.

ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ CCERF,CCEPF CCERR, CCEPR, NSR ಮತ್ತು NSPR ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು 30ನೇ ಆಗಸ್ಟ್ 2021 ರಿಂದ 4ನೇ ಸೆಪ್ಟಂಬರ್ 2021 ರವರೆಗೆ, ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ 31ನೇ ಆಗಸ್ಟ್ 2021 ರಿಂದ 06ನೇ ಸೆಪ್ಟಂಬರ್ 2021ರವರೆಗೆ ಹಾಗೂ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ 2ನೇ ಸೆಪ್ಟಂಬರ್2021 ರಿಂದ 08ನೇ ಸೆಪ್ಟಂಬರ್ 2021ರವರೆಗೆ ವಿಸ್ತರಿಸಲಾಗಿದೆ.

2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ ಪದ್ದತಿಯಂತೆ ಮಂಡಳಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ 2ನೇ ಸೆಪ್ಟಂಬರ್ 2021 ರಿಂದ 08ನೇ ಸೆಪ್ಟಂಬರ್ 2021ರವರೆಗೆ ವಿಸ್ತರಿಸಲಾಗಿದೆ.

CCERF, CCEPF, CCERR, CCEPR, NSR ಮತ್ತು NSPR ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನೊಳಗೊಂಡಂತೆ ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್ ಬಳಸಿಕೊಂಡು ಶುಲ್ಕ ಪಾವತಿಸಿದ ಮೂಲ ಚಲನ್, 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಎಂಎಸ್‌ಎ ಮತ್ತು ಹಿಂದಿನ ಪದ್ದತಿಯಂತೆ ಮಂಡಳಿ ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಿದ ಮೂಲ ಚಲನ್, ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ಇತರೆ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ನಿಗದಿಪಡಿಸಿದ ದಿನಾಂಕ 07ನೇ ಸೆಪ್ಟಂಬರ್ 2021 ರಿಂದ 14ನೇ ಸೆಪ್ಟಂಬರ್ 2021 ರವರೆಗೆ ಅವಧಿ ವಿಸ್ತರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಬೇಕರಿ ತರಬೇತಿ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಬೇಕರಿ ತರಬೇತಿ ಘಟಕದ ವತಿಯಿಂದ 4 ವಾರಗಳ ಬೇಕರಿ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸೆಪ್ಟೆಂಬರ್ 06 ರಿಂದ ಆರಂಭವಾಗುವ ತರಬೇತಿಯನ್ನು ಆಸಕ್ತಿಯುಳ್ಳ ಬೇಕರಿದಾರರಿಗೆ ಉದ್ದಿಮೆ ಮತ್ತು ಗೃಹಿಣಿಯರಿಗಾಗಿ ಆಯೋಜಿಸಲಾಗಿದೆ. ತರಬೇತಿಯಲ್ಲಿ ಬ್ರೆಡ್, ಬನ್, ಪಫ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳನ್ನು ತಯಾರಿಸಲು ತರಬೇತಿ ನೀಡಲಾಗುವುದು.

ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ. ಯಾವುದೇ ವಿದ್ಯಾರ್ಹತೆ ಅವಶ್ಯಕತೆಯಿಲ್ಲ. ತಯಾರಿಕೆಗೆ ಬೇಕಾದ ಕಚ್ಚಾ ಪದಾರ್ಥಗಳನ್ನು ತರಬೇತಿ ಘಟಕದಲ್ಲೇ ಒದಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು-560 024, ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080-23513370 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## BAKING COURSE

Bengaluru, August 30 (Karnataka Information):

The Bakery Training Unit, , Hebbal, Bangalore Is conducting ***4 weeks training course on Bakery Technology*** for the benefit of Housewives and Entrepreneurs from **06.09.2021**. Bakery products like special Biscuits, Bread Rolls, Puffs, Cakes and fancy items will be taught during the course. Participants will be allowed to learn by preparing the products by themselves. The interested persons can contact Coordinator in person or through telephone no. **23513370** during office hours.

## ಪ್ರವಾಸ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಸಿ.ಸೋಮಶೇಖರ ಭಾ.ಆ.ಸೇ (ನಿ),ಇವರು ಆಗಸ್ಟ್ 31ರಂದು ಬೀದರ್ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಿವಿಲ್ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಹುದ್ದೆಗಳ ಲಿಖಿತ ಪರೀಕ್ಷೆಗೆ ತರಬೇತಿ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

ಕರ್ನಾಟಕ ಸರ್ಕಾರವು ಮುಂದಿನ ದಿನಗಳಲ್ಲಿ ನಡೆಸಲಿರುವ ಪೊಲೀಸ್ ಇಲಾಖೆಯಲ್ಲಿನ ಸಾವಿರಕ್ಕೂ ಹೆಚ್ಚು ಸಿವಿಲ್ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಹುದ್ದೆಗಳ ನೇಮಕಾತಿ ಲಿಖಿತ ಪರೀಕ್ಷೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ತರಬೇತಿ ಹಮ್ಮಿಕೊಂಡಿದ್ದು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತರು ದಿನಾಂಕ: 07.09.2021 ರೊಳಗಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ **'ಮುಕ್ತಗಂಗೋತ್ರಿ'** ಆವರಣದಲ್ಲಿರುವ **'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'**ದ ಕಛೇರಿಯಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 4.00 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದೆಂದು ಕರಾಮುವಿ ಕುಲಸಚಿವ ಪ್ರೊ. ಆರ್. ರಾಜಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0821-2515944 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 30 (ಕರ್ನಾಟಕ ವಾರ್ತೆ):

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 30.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 31 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 37 | ಉತ್ತಮ | Ozone |
| 3 | ಕವಿಕ, ಮೈಸೂರುರಸ್ತೆ | 36 | ಉತ್ತಮ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 26 | ಉತ್ತಮ | Ozone |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 47 | ಉತ್ತಮ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 64 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 43 | ಉತ್ತಮ | $PM_{10}$, CO |
| **(30.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 39 | ಉತ್ತಮ | $PM_{10}$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 64 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 30.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 31 | Good | CO |
| 2 | Jayanagar 5th Block, Shalini ground | 37 | Good | Ozone |
| 3 | KAVIKA, Mysore Road | 36 | Good | CO |
| 4 | Rajeev Gandhi Institute of Chest Disease, NIMHANS, Hombegowda Nagar | 26 | Good | Ozone |
| 5 | HSR Layout, near Central Silkboard | 47 | Good | CO |
| 6 | City Railway Station, Magestic, Bengaluru | 64 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 43 | Good | $PM_{10}$, CO |
| **(30.8.2021 at 11.05 AM)** | | | | |
| 8 | BWSSB, Kadabesanahalli | 39 | Good | $PM_{2.5}$ |
| 9 | Peenya | * | * | * |
| 10 | BTM Layout | 64 | Satisfactory | CO |

*Data not available

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |